ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್.15/2022-23 (ಕೆಕೆ) ದಿನಾಂಕ:14-07-2023
ಸಂಖ್ಯೆ:ಇಡಿ/ಕೆಇಎ/ಆಡಳಿತ/ಸಿ.ಆರ್.15/2022-23 (ಆರ್‌ಪಿಸಿ) ದಿನಾಂಕ:14-07-2023

## ಪ್ರಕಟಣೆ

**ಕರ್ನಾಟಕ ರಾಜ್ಯದಲ್ಲಿನ ಸರ್ಕಾರಿ ಸಂಸ್ಥೆಗಳಲ್ಲಿ ಖಾಲಿ ಇರುವ ವಿವಿಧ ಹುದ್ದೆಗಳ ಯೋಜನ ನಿರಾಶ್ರಿತ ಮೀಸಲಾತಿ ಕೋರುವ ಅಭ್ಯರ್ಥಿಗಳು ಪ್ರಮಾಣ ಪತ್ರ ಸಂಖ್ಯೆ ನಮೂದಿಸುವ ಬಗ್ಗೆ.**

ಕರ್ನಾಟಕ ಪರೀಕ್ಷಾ ಪ್ರಾಧಿಕಾರವು (ಎ) ಕರ್ನಾಟಕ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ (ಬಿ) ಕರ್ನಾಟಕ ಆಹಾರ ಮತ್ತು ನಾಗರೀಕ ಸರಬರಾಜು ನಿಗಮ ನಿಯಮಿತ, (ಸಿ) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ, (ಡಿ) ಮೈಸೂರು ಸೇಲ್ಸ್ ಇಂಟರ್‌ನ್ಯಾಷನಲ್ ಲಿಮಿಟೆಡ್ ಸಂಸ್ಥೆಗಳಲ್ಲಿ ಖಾಲಿ ಇರುವ ಮಿಕ್ಕುಳಿದ ವೃಂದ ಮತ್ತು ಕಲ್ಯಾಣ ಕರ್ನಾಟಕ ಪ್ರದೇಶ (ಸ್ಥಳೀಯ) ವೃಂದದ ವಿವಿಧ ಹುದ್ದೆಗಳಿಗೆ ನೇರ ನೇಮಕಾತಿ ಸಂಬಂಧ ಆನ್‌ಲೈನ್ ಅರ್ಜಿಯನ್ನು ಸ್ವೀಕರಿಸಲಾಗುತ್ತಿದೆ.

ಯೋಜನ ನಿರಾಶ್ರಿತ ಮೀಸಲಾತಿಯನ್ನು ಕ್ಲೈಮ್ ಮಾಡುವ ಅಭ್ಯರ್ಥಿಗಳು ಮೀಸಲಾತಿ ಪ್ರಮಾಣ ಪತ್ರವನ್ನು ಸರ್ಕಾರದ ಆದೇಶ ಸಂಖ್ಯೆ: **"ಸಿಆಸುಇ 23 ಸೆನೆನಿ 99, ದಿನಾಂಕ 23.11.2000 ರನ್ವಯ ಯೋಜನೆಗಳಿಂದ ನಿರಾಶ್ರಿತರಾದ (ಆದರೆ ಈ ನಿಯಮಗಳು ಜಾರಿಯಾಗುವ 20 ವರ್ಷಕ್ಕೆ ಮುನ್ನ ನಿರಾಶ್ರಿತರಾದ ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಾತಿ ಅನ್ವಯವಾಗುವುದಿಲ್ಲ) ಕುಟುಂಬದ ಅಭ್ಯರ್ಥಿಗಳಿಗೆ ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ಸಂಬಂಧಿಸಿದ ತಹಶೀಲ್ದಾರರಿಂದ ನಿಗದಿತ ನಮೂನೆಯಲ್ಲಿ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು."** ಎಂದು ತಿಳಿಸಲಾಗಿದೆ, ಅದರಂತೆ ಅಭ್ಯರ್ಥಿಗಳು ಆನ್‌ಲೈನ್ ಅರ್ಜಿಯಲ್ಲಿ RD ಸಂಖ್ಯೆಯನ್ನು ನಮೂದಿಸುವುದು ಕಡ್ಡಾಯವಾಗಿರುತ್ತದೆ, ಹಾಗೂ ಪ್ರಮಾಣ ಪತ್ರದಲ್ಲಿ RD ಸಂಖ್ಯೆ ಇಲ್ಲವಾದರೆ, ಪ್ರಮಾಣ ಪತ್ರದಲ್ಲಿ ಸಂಬಂಧಪಟ್ಟ ತಹಶಿಲ್ದಾರ್‌ರವರು ನಮೂದಿಸಿರುವ ಪ್ರಮಾಣ ಪತ್ರ ಸಂಖ್ಯೆ ಅಥವಾ ಪ್ರಮಾಣ ಪತ್ರ ಜಾರಿಯಾದ ದಿನಾಂಕವನ್ನು ನಮೂದಿಸಬಹುದಾಗಿರುತ್ತದೆ.

ಕಾರ್ಯನಿರ್ವಾಹಕ ನಿರ್ದೇಶಕರು

18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in